# Bangalore
# Regional News
# 11.02.2026 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಸಕ್ಕರೆ, ಜವಳಿ, ಕೃಷಿ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಜೆಟ್ ಪೂರ್ವ ಸಮಾಲೋಚನೆ
2. ಕೆಎಸ್‌ಸಿಎ ಸುರಕ್ಷತಾ ಮಾತ್ರ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಪಂದ್ಯಗಳಿಗೆ ಸರ್ಕಾರ ಅವಕಾಶ
3. ಎನ್‌ಎಂಡಿಸಿಯಿಂದ ಅಕ್ರಮ ಅದಿರು ಸಾಗಾಣೆ ಪ್ರಕರಣ; ತನಿಖೆಗೆ ಸಚಿವ ಈಶ್ವರ್ ಖಂಡ್ರೆ ಆದೇಶ
4. 600ಕ್ಕೂ ಹೆಚ್ಚು ಕನ್ನಡ ಮಾಧ್ಯಮ ಶಾಲೆ ಮುಚ್ಚುವ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ಆಕ್ಷೇಪ
5. ಕೊಡಗಿನ ಬೆಸಗೂರಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳಿಂದ ವ್ಯಾಘ್ರನ ಸೆರೆ

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಕ್ತಿಭವನದಲ್ಲಿಂದು 2026-27ನೇ ಸಾಲಿನ ಆಯವ್ಯಯ ಕುರಿತಂತೆ ಪೂರ್ವಭಾವಿ ಸಭೆ ನಡೆಸಿದರು.

ಮೊದಲಿಗೆ ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಅಧಿಕಾರಿಗಳೊಂದಿಗೆ ಇಂದು ಸಭೆ ನಡೆಸಿದರು.

ಬಳಿಕ ಅವರು ಸಕ್ಕರೆ, ಜವಳಿ, ಕೃಷಿ ಮಾರುಕಟ್ಟೆ, ಕೃಷಿ ಇಲಾಖೆ ಸಚಿವರು ಹಾಗೂ ಅಧಿಕಾರಿಗಳೊಂದಿಗೆ ಬಜೆಟ್ ಪೂರ್ವ ಸಮಾಲೋಚನೆ ನಡೆಸಿದರು.

ಸಹಕಾರ, ಸಾರಿಗೆ, ಮುಜರಾಯಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಅಧಿಕಾರಿಗಳೊಂದಿಗೂ ಅವರು ಚರ್ಚೆ ನಡೆಸಿದರು.

***************

ರಾಜ್ಯ ಕ್ರಿಕೆಟ್ ಅಸೋಸಿಯೇಷನ್ – ಕೆಎಸ್‌ಸಿಎ ಸುರಕ್ಷತಾ ಶಿಫಾರಸ್ಸುಗಳ ಅನುಸರಣೆ ತೃಪ್ತಿಕರವಾಗಿದ್ದರೆ ಮಾತ್ರ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಪಂದ್ಯಗಳಿಗೆ ಅವಕಾಶ ನೀಡಲಾಗುವುದು ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನ್ಯಾಯಮೂರ್ತಿ ಮೈಕೆಲ್ ಡಿ. ಕುನ್ಹಾ ಸಮಿತಿ ನೀಡಿದ್ದ ಶಿಫಾರಸ್ಸುಗಳನ್ನು ಪಾಲಿಸದಿದ್ದರೆ ಅನುಮತಿ ನೀಡಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರ, ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದ್ದು, ನಾಳೆ ಈ ಕುರಿತಂತೆ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ.

***************

ಕೇಂದ್ರ ಸರ್ಕಾರಿ ಸ್ವಾಮ್ಯದ ಎನ್.ಎಂ.ಡಿ.ಸಿ.ಯಿಂದ ಅಕ್ರಮ ಅದಿರು ಸಾಗಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿ ವರದಿ ನೀಡುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಆದೇಶ ನೀಡಿದ್ದಾರೆ.

ತನಿಖೆಗೆ ಹೆಚ್ಚುವರಿ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ನೇತೃತ್ವದ ತ್ರಿಸದಸ್ಯ ತಂಡ ರಚಿಸಿ 7 ದಿನಗಳ ಒಳಗಾಗಿ ವರದಿ ಸಲ್ಲಿಸುವಂತೆ ಸೂಚಿಸಿದ್ದಾರೆ. ಅರಣ್ಯ ಪ್ರದೇಶದಿಂದ ಕಬ್ಬಿಣದ ಅದಿರು ಅಕ್ರಮವಾಗಿ ಸಾಗಾಟವಾಗಿದೆಯೇ, ನಿಯಮಗಳ ಉಲ್ಲಂಘನೆ ಆಗಿದೆಯೇ ಎಂಬ ತನಿಖೆ ನಡೆಸುವಂತೆ ತಿಳಿಸಿದ್ದಾರೆ.

***************

ರಾಜ್ಯದಲ್ಲಿ 600ಕ್ಕೂ ಹೆಚ್ಚು ಕನ್ನಡ ಮಾಧ್ಯಮ ಶಾಲೆಗಳನ್ನು ಮುಚ್ಚುವ ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ಕಳವಳ ವ್ಯಕ್ತಪಡಿಸಿದೆ.
ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ರಾಜ್ಯದ ಆರ್ಥಿಕಸ್ಥಿತಿ ಹದಗೆಟ್ಟಿದ್ದು, ಸರ್ಕಾರ ದಿವಾಳಿಯಾಗಿದೆ ಎಂದು ಆರೋಪಿಸಿದ್ದಾರೆ.
ಮುಚ್ಚಿರುವ ಕನ್ನಡ ಶಾಲೆಗಳನ್ನು ತಕ್ಷಣವೇ ತೆರೆಯಬೇಕು ಎಂದು ಒತ್ತಾಯಿಸಿದ್ದಾರೆ.

***************

ಭದ್ರಾ ಮೇಲ್ದಂಡೆ ಯೋಜನೆಗೆ ಅಗತ್ಯಕ್ಕೆ ತಕ್ಕಂತೆ ಅನುದಾನ ನೀಡಲಾಗುತ್ತಿದ್ದು, ಯಾವುದೇ ಬೃಹತ್ ಯೋಜನೆ ಒಂದೇ ಬಾರಿಗೆ ಪೂರ್ಣಗೊಳ್ಳುವುದಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಚಿತ್ರದುರ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಂತ ಹಂತವಾಗಿ ಅನುದಾನ ನೀಡಲಾಗುವುದು ಎಂದು ಹೇಳಿದ್ದಾರೆ.
ರಾಜ್ಯ ಸರ್ಕಾರ ಪರಿಶಿಷ್ಟಜಾತಿ ಪರಿಶಿಷ್ಟ ಪಂಗಡ ಸೇರಿದಂತೆ ಎಲ್ಲಾ ಹಿಂದುಳಿದ ವರ್ಗದವರಿಗೂ ಹೆಚ್ಚಿನ ಅನುದಾನ ಬಿಡುಗಡೆ ಮಾಡುತ್ತಿದೆ. ನೀರಾವರಿ, ಲೋಕೋಪಯೋಗಿ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಮರ್ಪಕ ಅನುದಾನ ನೀಡಲಾಗುತ್ತಿದ್ದು, ವಿರೋಧ ಪಕ್ಷದವರು ಸುಮ್ಮನೆ ಆರೋಪಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

***************

ಭಾರತೀಯ ರೈಲ್ವೆಯು ತನ್ನ ಅಧಿಕೃತ 'ಆಲ್-ಇನ್-ಒನ್' ಸೂಪರ್ ಆ್ಯಪ್ 'ರೈಲ್‌ಒನ್' ಅನ್ನು ಬಿಡುಗಡೆ ಮಾಡಿದೆ. ಇದು ಪ್ರಯಾಣಿಕರಿಗೆ ಹಲವಾರು ರೈಲ್ವೆ ಸೇವೆಗಳನ್ನು ಪಡೆಯಲು ಸುಲಭ ಮತ್ತು ಅನುಕೂಲಕರ ಡಿಜಿಟಲ್ ವೇದಿಕೆ ಒದಗಿಸಲಿದೆ. ಈ ಅಪ್ಲಿಕೇಶನ್ ಹಲವಾರು ಪ್ರಯಾಣಿಕ ಸೌಲಭ್ಯಗಳನ್ನು ಒಂದೇ ಅಪ್ಲಿಕೇಶನ್‌ನಲ್ಲಿ ಒಳಗೊಂಡಿದ್ದು, ರೈಲ್ವೆ ಪ್ರಯಾಣವನ್ನು ಹೆಚ್ಚು ಸ್ಮಾರ್ಟ್, ವೇಗ ಮತ್ತು ತೊಂದರೆ ರಹಿತವಾಗಿಸಲಿದೆ.
ರೈಲ್‌ಒನ್ ಆ್ಯಪ್ ಮೂಲಕ ಪ್ರಯಾಣಿಕರು ಕಾಯ್ದಿರಿಸಿದ ಟಿಕೆಟ್‌ಗಳು, ಕಾಯ್ದಿರಿಸದ ಟಿಕೆಟ್‌ಗಳು, ಪ್ಲಾಟ್‌ಫಾರ್ಮ್ ಟಿಕೆಟ್‌ಗಳು ಮತ್ತು ಸೀಸನ್ ಟಿಕೆಟ್‌ಗಳನ್ನು ಬುಕ್ ಮಾಡಬಹುದು.

***************

ಹಲವಾರು ದಿನಗಳಿಂದ ಕೊಡಗು ಜಿಲ್ಲೆಯ ಬೆಸಗೂರು ಗ್ರಾಮದಲ್ಲಿ ಗ್ರಾಮಸ್ಥರಿಗೆ ಪ್ರಾಣ ಭಯ ಉಂಟು ಮಾಡಿದ್ದ ಹುಲಿಯನ್ನು ಸೆರೆ ಹಿಡಿಯುವಲ್ಲಿ ಅರಣ್ಯ ಇಲಾಖೆ ಯಶಸ್ವಿಯಾಗಿದೆ.
ಎರಡು ಸಾಕಾನೆಗಳನ್ನು ಬಳಸಿ ಹುಲಿಯನ್ನು ಸೆರೆಹಿಡಿಯಲಾಗಿದೆ. ಇದು 6 ವರ್ಷದ ಗಂಡು ಹುಲಿ ಎಂದು ಎಸಿಎಫ್ ಗೋಪಾಲ್ ಮಾಹಿತಿ ನೀಡಿದ್ದಾರೆ. ಕಳೆದ 10 ದಿನಗಳಲ್ಲಿ 7 ಹಸುಗಳನ್ನು ಕೊಂದು ಹಾಕಿದ್ದ ಹುಲಿಯನ್ನು ಸೆರೆಹಿಡಿಯುವಂತೆ ಗ್ರಾಮಸ್ಥರು ಒತ್ತಾಯಿಸಿದ್ದರು. ಈ ಹಿನ್ನೆಲೆಯಲ್ಲಿ 2 ಸಾಕಾನೆ ಮತ್ತು 80 ಸಿಬ್ಬಂದಿ ಬಳಸಿ ವ್ಯಾಘ್ರನನ್ನು ಬಂಧಿಸಲಾಗಿದೆ. ಸೆರೆ ಹಿಡಿಯಲ್ಪಟ್ಟ ಹುಲಿಯನ್ನು ಬನ್ನೇರುಘಟ್ಟ ಅರಣ್ಯ ಪ್ರದೇಶಕ್ಕೆ ಬಿಡಲಾಗಿದೆ ಎಂದು ಅರಣ್ಯಾಧಿಕಾರಿಗಳು ಮಾಹಿತಿ ನೀಡಿದ್ದಾರೆ.

***************

ಈ ವರ್ಷವೂ ಹಂಪಿ ಉತ್ಸವವನ್ನು ವಿಭಿನ್ನ ರೀತಿಯಲ್ಲಿ ಆಚರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಬಿ. ಝೆಡ್. ಜಮೀರ್ ಅಹ್ಮದ್ ಖಾನ್ ತಿಳಿಸಿದ್ದಾರೆ.
ಇದೇ 13, 14 ಮತ್ತು 15 ರಂದು ನಡೆಯಲಿರುವ ವಿಶ್ವವಿಖ್ಯಾತ ಹಂಪಿ ಉತ್ಸವದ ಸಿದ್ಧತೆ ಕುರಿತಂತೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ಧತಾ ಕಾರ್ಯಗಳು ಬಹುತೇಕ ಪೂರ್ಣಗೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ.
ವೇದಿಕೆಯ ಮುಂಭಾಗದಲ್ಲಿ 50 ಸಾವಿರಕ್ಕೂ ಹೆಚ್ಚು ಆಸನಗಳ ವ್ಯವಸ್ಥೆ ಮಾಡಲಾಗಿದೆ. 50 ಕಿಲೋಮೀಟರ್‌ವರೆಗೂ ವಿವಿಧ ಕಲಾಕೃತಿಗಳ ಲೈಟಿಂಗ್ ಈ ಬಾರಿಯ ವಿಶೇಷವಾಗಿದೆ.

***************

ಕನ್ನಡದ ಹಿರಿಯ ಸಂಶೋಧಕ, ವಿಮರ್ಶಕ ಪ್ರೊ.ಬಿ.ಎ. ವಿವೇಕ ರೈ ಅವರ 'ಪಡುವಣ ತೀರದ ಕನ್ನಡ ನಾಡಿನ' ಕೃತಿ ಮಂಗಳೂರಿನಲ್ಲಿಂದು ಲೋಕಾರ್ಪಣೆಗೊಂಡಿದೆ.
ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದ ಹಿರಿಯ ವಿದ್ವಾಂಸ ಡಾ.ಕೆ.ಚಿನ್ನಪ್ಪ ಗೌಡ, ತುಳು ಸಂಸ್ಕೃತಿ, ಭಾಷೆ, ನೆಲ, ಬದುಕು ಇವೆಲ್ಲವನ್ನೂ ಸೇರಿಸಿ ಹೆಣೆದಿರುವ ಈ ಕೃತಿ ಅತ್ಯಂತ ಮಹತ್ವಪೂರ್ಣವಾಗಿದೆ. 80ರ ಹರೆಯದಲ್ಲೂ

ಉತ್ಸಾಹದಿಂದ ಎಲ್ಲರನ್ನು ಹುಬ್ಬೇರಿಸುವಂತೆ ಅತ್ಯದ್ಭುವಾದ ಕೃತಿಯನ್ನು ವಿವೇಕ ರೈ ಹೊರತಂದಿದ್ದಾರೆ. ಈ ಕೃತಿ ಮೂಲಕ ಅವರು ಮತ್ತಷ್ಟು ಸರಣಿಗಳನ್ನು ಬರೆಯುವ ಕುತೂಹಲ ಮೂಡಿಸಿದ್ದಾರೆ  ಎಂದು ತಿಳಿಸಿದ್ದಾರೆ.

***************

ತಂತ್ರಜ್ಞಾನ ಯುಗದಲ್ಲಿ ಅಂತರ್ಜಾಲವನ್ನು ಎಚ್ಚರಿಕೆಯಿಂದ ಬಳಸಬೇಕು ಹಾಗೂ ಅನಾವಶ್ಯಕ ಲಿಂಕ್‌ಗಳನ್ನು ತೆರೆದು ವಂಚನೆಗೆ ಒಳಗಾಗಬಾರದು ಎಂದು ಉತ್ತರಕನ್ನಡ ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ ತಿಳಿಸಿದ್ದಾರೆ.

ವಿಶ್ವ ಸುರಕ್ಷಿತ ಅಂತರ್ಜಾಲ ದಿನದ ಕಾರ್ಯಾಗಾರದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬರ ಜೀವನದಲ್ಲಿ ಅಂತರ್ಜಾಲ ಅವಿಭಾಜ್ಯ ಅಂಗವಾಗಿದೆ. ಅಂತರ್ಜಾಲ ಬಳಕೆಯಿಂದ ಆಗುವ ಉಪಯೋಗದಕ್ಕಿಂತ ಅದರಿಂದ ಆಗುವ ಅನಾಹುತಗಳೇ ಹೆಚ್ಚಾಗಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ವೈಯಕ್ತಿಕ ಮಾಹಿತಿಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವುದು, ಆನ್‌ಲೈನ್ ಮೂಲಕ ಹೂಡಿಕೆ ಮಾಡದಂತೆ ಕರೆ ನೀಡಿದ್ದಾರೆ.

***************

ಕೋಲಾರ ಜಿಲ್ಲೆಯಾದ್ಯಂತ 2025-26ನೇ ಸಾಲಿನಲ್ಲಿ 10ನೇ ತರಗತಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಲ್ಲಿನ ಕಲಿಕೆ ಹಾಗೂ ಪರೀಕ್ಷೆ ಕುರಿತ ಗೊಂದಲ ನಿವಾರಣೆಗೆ ನಾಳೆ ಜಿಲ್ಲಾ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಫೋನ್-ಇನ್ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಕೋಲಾರ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಅಲ್ಮಾಸ್ ಫರ್ವೀನ್ ತಾಜ್ ತಿಳಿಸಿದ್ದಾರೆ.

ಎಸ್ಸೆಸ್ಸೆಲ್ಸಿ ಫಲಿತಾಂಶ ಉತ್ತಮಗೊಳಿಸುವ ನಿಟ್ಟಿನಲ್ಲಿ ಈಗಾಗಲೇ ಜನಪ್ರತಿನಿಧಿಗಳ ಸಹಕಾರದೊಂದಿಗೆ ರಾತ್ರಿ ಮನೆ ಭೇಟಿ ಕಾರ್ಯಕ್ರಮ ನಡೆಸಲಾಗಿದೆ. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳನ್ನು ಮುಖ್ಯವಾಹಿನಿಗೆ ತರುವುದು ಶಾಲಾ ಶಿಕ್ಷಣ ಇಲಾಖೆ ಪ್ರಮುಖ ಗುರಿ ಎಂದು ಹೇಳಿದ್ದಾರೆ.

***************

ವಿಜಯಪುರ  ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪ್ರಕರಣಗಳು ಕಂಡುಬರದಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ ತಿಳಿಸಿದ್ದಾರೆ.

ವಿಜಯಪುರದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈಗಾಗಲೇ ಪತ್ತೆ ಆಗಿರುವ ಬಾಲ ಕಾರ್ಮಿಕ ಪ್ರಕರಣದ ವರದಿಯನ್ನು ಕ್ರೋಢೀಕರಿಸಿ ಶೀಘ್ರವೇ ಸಲ್ಲಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳ ವರದಿಯನ್ನು ನೀಡಬೇಕು ಎಂದು ಸೂಚಿಸಿದ್ದಾರೆ.

ಒಂದು ವಾರಕ್ಕಿಂತ ಹೆಚ್ಚು ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ನಿಗಾವಹಿಸಿ, ಖುದ್ದು ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು ಎಂದು ಹೇಳಿದ್ದಾರೆ.

***************

ವಿಜಯಪುರ  ಜಿಲ್ಲೆಯಲ್ಲಿ ಬಾಲ ಕಾರ್ಮಿಕ ಪ್ರಕರಣಗಳು ಕಂಡುಬರದಂತೆ ನಿಗಾವಹಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಆನಂದ ಕೆ ತಿಳಿಸಿದ್ದಾರೆ.

ವಿಜಯಪುರದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈಗಾಗಲೇ ಪತ್ತೆ ಆಗಿರುವ ಬಾಲ ಕಾರ್ಮಿಕ ಪ್ರಕರಣದ ವರದಿಯನ್ನು ಕ್ರೋಢೀಕರಿಸಿ ಶೀಘ್ರವೇ ಸಲ್ಲಿಸಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳ ವರದಿಯನ್ನು ನೀಡಬೇಕು ಎಂದು ಸೂಚಿಸಿದ್ದಾರೆ.

ಒಂದು ವಾರಕ್ಕಿಂತ ಹೆಚ್ಚು ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ನಿಗಾವಹಿಸಿ, ಖುದ್ದು ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಬೇಕು ಎಂದು ಹೇಳಿದ್ದಾರೆ.

***************

ಯಾದಗಿರಿ ಜಿಲ್ಲೆಯಲ್ಲಿ ಅಕ್ರಮ ಮದ್ಯ, ಮಾದಕ ವಸ್ತುಗಳು ಹಾಗೂ ಕಳ್ಳಭಟ್ಟಿ ಸಾರಾಯಿ ಅಕ್ರಮ ಮಾರಾಟ ಮತ್ತು ಸಾಗಾಣಿಕೆಯನ್ನು ಕಟ್ಟುನಿಟ್ಟಾಗಿ ನಿಯಂತ್ರಿಸಲು ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ರಾಜ್ಯ ಮದ್ಯಪಾನ ಸಂಯಮ ಮಂಡಳಿ ಅಧ್ಯಕ್ಷ ಶರಣಪ್ಪ ಸಲದಾಪುರ ಸೂಚಿಸಿದ್ದಾರೆ.

ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಅಬಕಾರಿ, ಪೊಲೀಸ್ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯಾಚರಣೆ ನಡೆಸಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದ್ದಾರೆ.

***************

ರಾಷ್ಟ್ರೀಯ ಜೀವನೋಪಾಯ ಅಭಿಯಾನದ ನಿರ್ದೇಶಕರಾಗಿದ್ದ ಹಿರಿಯ ಐಎಎಸ್ ಅಧಿಕಾರಿ ಸ್ನೇಹಲ್.ಆರ್ ಧಾರವಾಡ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಇಂದು ಅಧಿಕಾರ ವಹಿಸಿಕೊಂಡಿದ್ದಾರೆ.

ನೂತನ ಜಿಲ್ಲಾಧಿಕಾರಿಯನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಪ್ರಭಾರ ಜಿಲ್ಲಾಧಿಕಾರಿಯಾಗಿದ್ದ ಭುವನೇಶ್ ಪಾಟೀಲ್, ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಗರೀಮಾ ಪವಾರ್ ಸ್ವಾಗತಿಸಿದರು.

***************

ಭಟ್ಕಳ ತಾಲೂಕಿನ ಮುರುಡೇಶ್ವರದಲ್ಲಿ ಶಿವರಾತ್ರಿ ಪ್ರಯುಕ್ತ ಇದೇ 15ರಂದು ಶಿವರಾತ್ರಿ ಜಾಗರಣೆ ಉತ್ಸವವನ್ನು ಅದ್ದೂರಿಯಾಗಿ ನಡೆಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಮಾತನಾಡಿ, ಶಿವರಾತ್ರಿ ಜಾಗರಣೆ ಉತ್ಸವವಕ್ಕೆ ಸಾರಿಗೆ, ವಸತಿ, ಸುರಕ್ಷತೆ, ಭದ್ರತೆ ಹಾಗೂ ಸ್ವಚ್ಛತೆಗೆ ಪ್ರಮುಖ ಆದ್ಯತೆ ಕೊಡಲಾಗಿದೆ ಎಂದು ಹೇಳಿದ್ದಾರೆ.

*******ಮುಕ್ತಾಯ*******